1	2	3
5.	ಶಿವಮೊಗ್ಗ	97277
6.	ತುಮಕೂರು	90238
7.	ಬೆಳಗಾಂ	97249
8.	ಬಿಜಾಪುರ	112154
9.	ಧಾರವಾಡ	138130
10.	ಉತ್ತರ ಕನ್ನಡ	103064
11.	ಬಳ್ಳಾರಿ	63246
12.	ಬೀದರ್	47316
13.	ಗುಲ್ಬರ್ಗ	99966
14.	ರಾಯಚೂರು	85941
15.	ಚಿಕ್ಕಮಗಳೂರು	60140
16.	ದಕ್ಷಿಣ ಕನ್ನಡ	93212
17.	ಹಾಸನ	79406
18.	ಕೊಡಗು	27258
19.	ಮಂಡ್ಯ	60360
20.	ಮೈಸೂರು	99727
	ಒಟ್ಟು	1608541

ವ್ಯವಸಾಯೋತ್ಪನ್ನ ಮಾರುಕಟ್ಟೆಗಳಲ್ಲಿ ದಳ್ಳಾಳಿ ವಸೂಲಾತಿ.

1484 - ಶ್ರೀ ಆರ್.ಎಲ್. ಜಾಲಪ್ಪ (ದೊಡ್ಡಬಳ್ಳಾಪುರ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ವ್ಯವಸಾಯೋತ್ಪನ್ನಗಳ ಮಾರುಕಟ್ಟೆಯಲ್ಲಿ ಕಾನೂನಿಗೆ ವಿರುದ್ಧವಾಗಿ ರೈತರಿಂದ ಶೇ. 2 ರಿಂದ 10ರವರೆಗೆ ದಳ್ಳಾಳಿ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದರೆ ಅದನ್ನು ತಪ್ಪಿಸಲು ಸರ್ಕಾರದವರು ಕೈಗೊಂಡಿರುವ ಕ್ರಮವೇನು?*

ಇ) *ವ್ಯವಸಾಯೋತ್ಪನ್ನಗಳ ಮಾರಾಟ ಸಮಿತಿಗಳಿಗೆ ಯಾವಾಗ ಚುನಾವಣೆ ನಡೆಸಲಾಗುವುದು?*

ಶ್ರೀ ಕೆ.ಹೆಚ್. ಪಾಟೀಲ್ (ಸಹಕಾರ ಮಂತ್ರಿಗಳು) :

ಅ) ಕೆಲವೊಂದು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆ.

ಆ) ಈ ಕೆಳಗೆ ಕಾಣಿಸಿದ ಕ್ರಮಗಳನ್ನು ಜರುಗಿಸಲಾಗಿದೆ.

ಅ) ರೈತರಲ್ಲಿ ಕಾನೂನಿನ ಬಗ್ಗೆ ಜಾಗೃತಿ ಮೂಡಿಸಲು ಕೃಷಿ ಮಾರಾಟ ಮಂಡಳಿ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಈ ಕುರಿತು ಕರಪತ್ರಗಳ ಪೋಸ್ಟರುಗಳ, ಧ್ವನಿವರ್ದಕಗಳ ಮೂಲಕ ಹಾಗೂ ಮಾರುಕಟ್ಟೆ ಸಮಿತಿಗಳ ಪ್ರಾಂಗಣಗಳಲ್ಲಿ ದೊಡ್ಡ ಹೋರ್ಡಿಂಗ್‌ಗಳನ್ನು (ದೊಡ್ಡ ಬೋರ್ಡುಗಳು) ಸ್ಥಾಪಿಸುವ ಮೂಲಕ ವ್ಯಾಪಕ ಪ್ರಚಾರ ಕೈಗೊಂಡಿದೆ. ಆಕಾಶವಾಣಿ ನಿಲಯಗಳ ಸಹಯೋಗದೊಂದಿಗೆ ಬಾನುಲಿ ಪಾಠಗಳನ್ನು ರೈತರಲ್ಲಿ ಜಾಗೃತಿ ಮೂಡಿಸಲು ನಡೆಸಲಾಗುತ್ತಿದೆ.

ಆ) ದಳ್ಳಾಳಿಗಳ : ವರ್ತಕರ ಲೆಕ್ಕ ಪತ್ರಗಳನ್ನು ಕಾನೂನು ಪ್ರಕಾರ ಪರಿಶೀಲಿಸಲು ಮಾರುಕಟ್ಟೆ ಸಮಿತಿಗಳಿಗೆ ಮತ್ತು ಇಲಾಖಾ ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಲಾಗಿದೆ. ಮತ್ತು ರೈತರಿಂದ ದಲ್ಲಾಲರು ಕಾನೂನು ಬಾಹಿರವಾಗಿ ದಲ್ಲಾಲಿ ಪಡೆದ ಪ್ರಕರಣಗಳು ಕಂಡು ಬಂದಲ್ಲಿ ತಪ್ಪಿತಸ್ಥ ದಲ್ಲಾಲರ ಮೇಲೆ ಕಾನೂನು ಪ್ರಕಾರ ನಿರ್ಧಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲಾ ಮಾರುಕಟ್ಟೆ ಸಮಿತಿಗಳಿಗೆ ನಿರ್ದೇಶನ ನೀಡಲಾಗಿದೆ.

ಇ) ರಾಜ್ಯದಲ್ಲಿನ 32 ಮಾರುಕಟ್ಟೆಗಳಲ್ಲಿ 232 ಪ್ರಕರಣಗಳನ್ನು ಪತ್ತೆ ಹಚ್ಚಿ ಕಾಯ್ದೆ ವಿರುದ್ಧ ರೈತರಿಂದ ವಸೂಲಿ ಮಾಡಲ್ಪಟ್ಟಿದ್ದ ರೂ. 55,421-00ಗಳನ್ನು ರೈತರಿಗೆ ವಾಪಾಸ್ಸು ಮಾಡಲಾಗಿದೆಯಲ್ಲದೆ ಕೆಲವೊಂದು ಪ್ರಕರಣಗಳಲ್ಲಿ ಸಂಬಂಧಿಸಿದ ದಲ್ಲಾಲರ ಮೇಲೆ ಕಾಯ್ದೆ ಪ್ರಕಾರ ಕ್ರಮ ಜರುಗಿಸಲಾಗಿದೆ.

ಈ) ಚುನಾವಣೆ ವಿಷಯಗಳೂ ಸೇರಿದಂತೆ ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ, 1966ಕ್ಕೆ ಸಮಗ್ರ ತಿದ್ದುಪಡಿಗಳನ್ನು ಮಾಡಲು ಪ್ರಸ್ತಾಪವು ಸರ್ಕಾರದ ಪರಿಶೀಲನೆಯಲ್ಲಿರುವುದರಿಂದ ಈ ತಿದುಪಡಿಗಳು ಆದ ನಂತರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಚುನಾವಣೆಗಳನ್ನು ನಡೆಸುವ ವಿಚಾರವನ್ನು ಸರ್ಕಾರವು ಪರಿಶೀಲಿಸುವುದು.

ಸಕ್ಕರೆ ಕಾರ್ಖಾನೆಗಳನ್ನು ಸುಧಾರಿಸುವ ಬಗ್ಗೆ.

1432 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ? -

ಅ) ರಾಜ್ಯದಲ್ಲಿರುವ ಸಹಕಾರ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು? (ಹೆಸರು, ಸ್ಥಳಗಳ ವಿವರ ಒದಗಿಸುವುದು).

ಆ) ಈ ಕಾರ್ಖಾನೆಗಳಲ್ಲಿ ಎಷ್ಟು ಕಾರ್ಖಾನೆಗಳು ಲಾಭದಲ್ಲಿ ಮತ್ತು ಎಷ್ಟು ಕಾರ್ಖಾನೆಗಳು ನಷ್ಟದಲ್ಲಿ ನಡೆಯುತ್ತಿದೆ?

ಇ) ನಷ್ಟದಲ್ಲಿ ನಡೆಯುತ್ತಿರುವ ಸಕ್ಕರೆ ಕಾರ್ಖಾನೆಗಳನ್ನು ಸುಧಾರಿಸುವ ಬಗ್ಗೆ ಸರ್ಕಾರ ಮುಂದೆ ಯಾವುದಾದರೂ ಕಾರ್ಯಕ್ರಮಗಳಿವೆಯೇ?

ಶ್ರೀ ಕೆ.ಹೆಚ್. ಪಾಟೀಲ್ (ಸಹಕಾರ ಸಚಿವರು) :

ಅ) ಹದಿನಾರು

1. ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ, ಪಾಂಡವಪುರ, ಮಂಡ್ಯ ಜಿಲ್ಲೆ.
2. ಹಿರಣ್ಯಕೇಶಿ ಸಹಕಾರ ಸಕ್ಕರೆ ಕಾರ್ಖಾನೆ, ಸಂಕೇಶ್ವರ, ಬೆಳಗಾವಿ ಜಿಲ್ಲೆ.
3. ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ, ಹಳ್ಳಿಖೇಡ್, ಬೀದರ್.
4. ಮಲಪ್ರಭಾ ಸಹಕಾರ ಸಕ್ಕರೆ ಕಾರ್ಖಾನೆ, ಎಂ.ಕೆ. ಹುಬ್ಬಳ್ಳಿ. ಬೆಳಗಾಂ ಜಿಲ್ಲೆ.
5. ದೂದ್ ಗಂಗಾ ಕೃಷ್ಣಾ ಸಹಕಾರ ಸಕ್ಕರೆ ಕಾರ್ಖಾನೆ, ಚಿಕ್ಕೋಡಿ, ಬೆಳಗಾಂ ಜಿಲ್ಲೆ.